ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1340
2.	ಮಾನ್ಯ ಸದಸ್ಯರ ಹೆಸರು	:	ಶ್ರೀ ಎಸ್.ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3.	ಉತ್ತರಿಸುವ ದಿನಾಂಕ	:	23.09.2021
4.	ಉತ್ತರಿಸುವ ಸಚಿವರು	:	ಗೃಹ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಮೈಸೂರು ನಗರದಲ್ಲಿರುವ ಯಾವ ಯಾವ ಪೊಲೀಸ್ ಠಾಣೆಗಳಿಗೆ ನೂತನ ಸುಸಜ್ಜಿತ ಕಟ್ಟಡ ನಿರ್ಮಾಣಕ್ಕೆ ಯೋಜನೆಯನ್ನು ರೂಪಿಸಲಾಗಿದೆ; ಈ ನಿರ್ಮಾಣ ಕಾಮಗಾರಿಗೆ ಅನುಮೋದನೆ ದೊರಕಿದೆಯೇ; ಇದಕ್ಕಾಗಿ ಮಂಜೂರು ಮಾಡಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಕಾಮಗಾರಿ ಯಾವಾಗ ಆರಂಭವಾಗಲಿದೆ;</td><td>ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/41/ಪಿಬಿಎಲ್/2021, ದಿ:13/7/2021 ರಲ್ಲಿ ರಾಜ್ಯದಲ್ಲಿ ಸ್ವಂತ ಕಟ್ಟಡಗಳಿಲ್ಲದ 100 ಪೊಲೀಸ್ ಠಾಣೆಗಳಿಗೆ ರೂ.200.00 ಕೋಟಿಗಳ ವೆಚ್ಚದಲ್ಲಿ ನೂತನ ಕಟ್ಟಡ ನಿರ್ಮಾಣ ಮಾಡಲು ಹಾಗೂ ಟೆಂಡರ್ ಕರೆಯಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಈ ಆದೇಶದಲ್ಲಿ ಮೈಸೂರು ನಗರದ ಈ ಕೆಳಕಂಡ ಪೊಲೀಸ್ ಠಾಣೆಗಳಿಗೆ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.
<table>
<tr><th>ಕ್ರ ಸಂ</th><th>ನೂತನ ಕಟ್ಟಡ ನಿರ್ಮಾಣ ಮಾಡಲು ಉದ್ದೇಶಿಸಲಾಗಿರುವ ಪೊಲೀಸ್ ಠಾಣೆಗಳ ಹೆಸರು</th><th>ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)</th></tr>
<tr><td>1.</td><td>ಆಲನಹಳ್ಳಿ ಪೊಲೀಸ್ ಠಾಣೆ</td><td>215.00</td></tr>
<tr><td>2.</td><td>ಹೆಬ್ಬಾಳ ಪೊಲೀಸ್ ಠಾಣೆ</td><td>215.00</td></tr>
<tr><td>3.</td><td>ದೇವರಾಜ ಪೊಲೀಸ್ ಠಾಣೆ</td><td>170.00</td></tr>
<tr><td>4.</td><td>ದೇವರಾಜ ಸಂಚಾರ ಪೊಲೀಸ್ ಠಾಣೆ</td><td>150.00</td></tr>
</table></td></tr>
<tr><td>ಆ)</td><td>ಮೈಸೂರು ನಗರದ ಸಿದ್ಧಾರ್ಥ ನಗರ ಸಂಚಾರಿ ಪೊಲೀಸ್ ಠಾಣೆಯ ಕಟ್ಟಡ ದುರಸ್ಥಿಯಲ್ಲಿದ್ದು, ಅಧಿಕಾರಿಗಳು ಮತ್ತು ಸಿಬ್ಬಂದಿಯ ಕಾರ್ಯನಿರ್ವಹಣೆಗೆ ದಾಖಲಾತಿಗಳ ಸಂರಕ್ಷಣೆಗೆ ತೊಂದರೆ ಆಗಿರುವುದು ಗಮನಕ್ಕೆ ಬಂದಿದೆಯೇ; ತಕ್ಷಣ ಈ ಠಾಣೆಯ ದುರಸ್ಥಿ ಕಾರ್ಯವನ್ನು ಕೈಗೊಳ್ಳಲಾಗುವುದೇ; ಹಾಗೂ ಹೊಸ ಕಟ್ಟಡದ ನಿರ್ಮಾಣಕ್ಕೆ ಕ್ರಮ ಜರುಗಿಸಲಾಗುವುದೇ?</td><td>ಸಿದ್ಧಾರ್ಥನಗರ ಸಂಚಾರ ಪೊಲೀಸ್ ಠಾಣೆಯು ಹಾಲಿ ಜೆ.ಸಿ.ಓ ವಸತಿ ಗೃಹದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸದರಿ ಕಟ್ಟಡವು ವಸತಿಗೃಹವಾಗಿದ್ದು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಟ್ಟಡದಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಯ ಕಾರ್ಯನಿರ್ವಹಣೆ, ದಾಖಲಾತಿಗಳ ಸಂರಕ್ಷಣೆಗೆ ಯಾವುದೇ ತೊಂದರೆ ಇಲ್ಲದಿರುವುದರಿಂದ ದುರಸ್ತಿ ಕಾರ್ಯವನ್ನು ಕೈಗೊಂಡಿರುವುದಿಲ್ಲ.

ಸಿದ್ಧಾರ್ಥನಗರ ಸಂಚಾರ ಪೊಲೀಸ್ ಠಾಣೆಗೆ ಹೊಸ ಕಟ್ಟಡದ ನಿರ್ಮಾಣದ ಕುರಿತು ನಿವೇಶನ ಮತ್ತು ಅನುದಾನ ಲಭ್ಯತೆಯ ಮೇಲೆ ಕ್ರಮ ಕೈಗೊಳ್ಳಲಾಗುವುದು.</td></tr>
</table>

ಸಂಖ್ಯೆ:ಹೆಚ್‌ಡಿ 75 ಪಿಬಿಎಲ್ 2021

(ಆರಗ ಜ್ಞಾನೇಂದ್ರ)
ಗೃಹ ಸಚಿವರು